**2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಹೊಸಕೋಟೆ**
**ಸಿ.ಸಿ. 1100/2015**

| | | |
|---|---|---|
| ಹೆಸರು | ಶಾಂತಾ | ಪ್ರಾ.ಸಾ.3 |
| ಗಂಡನ ಹೆಸರು | ವೆಂಕಟೇಶ | ಚಾ.ಸಾ.2 |
| ವಯಸ್ಸು | 30 ವರ್ಷ | |
| ಕೆಲಸ | ವ್ಯಾಪಾರ | ಸಾ.ಪ್ರ.ವ.ಬೋ |
| ವಾಸ | ಯಶವಂತಪುರ | ದಿ: 12.08.2022 |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿರವರಿಂದ: –**

ನನಗೆ ಈ ಪ್ರಕರಣದ ವಿಚಾರ ಏನೂ ಗೊತ್ತಿಲ್ಲ. ನಾನು ಯಾವುದೇ ಘಟನೆಯನ್ನು ನೋಡಿರಿವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**[ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಮಾನ್ಯ ಎಪಿಪಿರವರು ಕೋರಿದ್ದು, ಅನುಮತಿ ನೀಡಲಾಯಿತು.]**

**ಪಾಟಿ ಸವಾಲು : ಮಾನ್ಯ ಎಪಿಪಿರವರಿಂದ:–**

ದಿ: 03.04.2015 ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಹೊಸಕೋಟೆ–ಚಿಂತಾಮಣಿ ರಸ್ತೆ, ಭೀಮಾಕನಹಳ್ಳಿ ಗ್ರಾಮದ ಬಳಿ ನ್ಯೂಹೋರೆಜ್ ಶಾಲೆಯ ಬಳಿ ಹೋಗುತ್ತಿದ್ದಾಗ ಎದುರಿನಿಂದ ಒಂದು ಕಾರನ್ನು ಅದರ ಚಾಲಕ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಮ್ಮ ಆಟೋಗೆ ಡಿಕ್ಕಿ ಹೊಡೆದಿದ್ದು, ಪರಿಣಾಮ ನಾವು ಆಟೋ ಸಮೇತ ರಸ್ತೆಯ ಮೇಲೆ ಬಿದ್ದು, ನಂತರ ಸಾವರಿಸಿಕೊಂಡು ಏಳಲಾಗಿ ಆಟೋದಲ್ಲಿದ್ದ ನನ್ನ ಮಗ ಧನುಷ್‌ಗೆ ತಲೆ ಮತ್ತು ಮೈಕೈಗಳಿಗೆ ಪೆಟ್ಟು ಬಿದ್ದು, ರಕ್ತಗಾಯವಾಗಿದ್ದು ಪ್ರಜ್ಞೆ ಇರಲಿಲ್ಲ ಹಾಗೂ ನಮ್ಮ ಆಟೋಗೆ ಡಿಕ್ಕಿ ಹೊಡೆಸಿದ ಕಾರು ಮತ್ತೊಂದು ಮೋಟಾರ್ ಸೈಕಲ್‌ಗೆ ಡಿಕ್ಕಿ ಹೊಡೆಸಿದ್ದು, ಆ ಮೋಟಾರ್ ಸೈಕಲ್ ಸವಾರ ಸ್ಥಳದಲ್ಲಿಯೇ ಮೃತ ಪಟ್ಟನು ಎಂದು ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಸಾಕ್ಷಿ ನಿರಾಕರಿಸಿದ್ದರಿಂದ ಅದನ್ನು ನಿ.ಪಿ.6 ಎಂದು ಗುರ್ತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರಿಂದ : ಪಾಟಿ ಸವಾಲು: ಇಲ್ಲ.**

**ಮರುವಿಚಾರಣೆ ಇಲ್ಲ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಿಸಲಾಯಿತು)**

**ಓ.ಹೇ.ಕೇ.ಸ.ಇದೆ**

**2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,**
**ಹೊಸಕೋಟೆ.**